ಡಾ॥ ಶಾಲಿನಿ ರಜನೀಶ್, ಭಾ.ಆ.ಸೇ.
ಸರ್ಕಾರದ ಕಾರ್ಯದರ್ಶಿ

Dr. SHALINI RAJNEESH, IAS
Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

Karnataka Government Secretariat
Rural Development & Panchayat Raj Department

ಸಂಖ್ಯೆ: ಗ್ರಾಅಪ/212/ಗ್ರಾಪಂಅ/2011

ದಿನಾಂಕ: 11-07-2012.

**ತುರ್ತು, ಆದ್ಯತೆ, ನ್ಯಾಯಾಲಯದ ಪ್ರಕರಣ**

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಗ್ರಾಮಸಭೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 8 ಗ್ರಾಪಂಅ 2012 ದಿನಾಂಕ: 08-03-2012.
2. ಇದೇ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 01-08-2011 ಮತ್ತು 29-06-2012.

ಕರ್ನಾಟಕ ರಾಜ್ಯದಲ್ಲಿ ಆರೋಗ್ಯ ತಪಾಸಣೆಯಿಲ್ಲದೆ ಅಪೌಷ್ಟಿಕತೆ ಮತ್ತು ಹಸಿವಿನಿಂದ ಬಳಲುತ್ತಿರುವ ಮಕ್ಕಳು ಮತ್ತು ಅವರ ಸಾವಿನ ಬಗ್ಗೆ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿಯ ರಿಟ್ ಅರ್ಜಿ ಸಂಖ್ಯೆ: 381757/2011 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 12-04-2012 ರಂದು ಈ ವಿಷಯಕ್ಕೆ ಸಂಬಂಧಪಟ್ಟಂತೆ ಹಲವಾರು ಅಂಶಗಳನ್ನು ಸಮಗ್ರವಾಗಿ ಅಧ್ಯಯನ ಮಾಡಿ ಸಮಸ್ಯೆ ಪರಿಹಾರಕ್ಕಾಗಿ ವರದಿ ಮತ್ತು ಕ್ರಿಯಾ ಯೋಜನೆಯನ್ನು ಸಲ್ಲಿಸುವಂತೆ ಮಾನ್ಯ ಉಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ ಎನ್.ಕೆ. ಪಾಟೀಲ್ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯು ಮಧ್ಯಂತರ ವರದಿಯನ್ನು ಸಲ್ಲಿಸಿ ಅದರನ್ವಯ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ದಿನಾಂಕ: 29-06-2012 ರಂದು ಸುತ್ತೋಲೆ ಹೊರಡಿಸಲಾಗಿದೆ.

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಆರೋಗ್ಯ ಮತ್ತು ಪೌಷ್ಟಿಕಾಂಶಕ್ಕೆ ಸಂಬಂಧಿಸಿದ ಬಗ್ಗೆ ವಿಶೇಷ ಗ್ರಾಮಸಭೆಯನ್ನು ಆಯೋಜಿಸುವಂತೆ ಉಲ್ಲೇಖಿತ ಸುತ್ತೋಲೆಗಳಲ್ಲಿ ವಿವರವಾದ ರೂಪುರೇಷೆಗಳ ಮಾರ್ಗಸೂಚಿಗಳನ್ನು ನೀಡಲಾಗಿದೆ.

**ಈ ಹಿನ್ನೆಲೆಯಲ್ಲಿ, ಎಲ್ಲಾ ಜಿಲ್ಲಾ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ವಿಶೇಷ ಗ್ರಾಮ ಸಭೆಗಳನ್ನು ಜುಲೈ-ಆಗಸ್ಟ್ ಮಾಹೆಯಲ್ಲಿ ಆಯೋಜಿಸುವುದು. ಈ ಗ್ರಾಮ ಸಭೆಗಳಲ್ಲಿ ಮಹಿಳೆ ಮತ್ತು ಮಕ್ಕಳಿಗೆ ಸಂಬಂಧಿಸಿದಂತೆ ಅಪೌಷ್ಟಿಕತೆ, ಆರೋಗ್ಯ ತಪಾಸಣೆ ಮತ್ತು ನಿಗದಿತ ಅವಧಿಯಲ್ಲಿ ರೋಗನಿರೋಧಕ ಚುಚ್ಚುಮದ್ದು, ಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ, ಹೆಣ್ಣು ಭ್ರೂಣ ಹತ್ಯೆ, ಹೆಣ್ಣು ಶಿಶು ಹತ್ಯೆ ಹಾಗೂ ಅಂಗನವಾಡಿ ಶಾಲೆಗಳಲ್ಲಿ ಆರೋಗ್ಯಕರ ಆಹಾರ, ಕುಡಿಯುವ ನೀರಿನ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುವ ಬಗ್ಗೆ ಕಾರ್ಯಕ್ರಮಗಳನ್ನು ರೂಪಿಸುವುದು ಸೇರಿದಂತೆ ಕ್ರಿಯಾ ಯೋಜನೆಯಲ್ಲಿ ಇಂತಹ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸಲು ಅಗತ್ಯ ಕ್ರಮ ವಹಿಸುವಂತೆ ಕೋರಿದೆ ಹಾಗೂ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವುದು.**

ಆದರಗಳೊಡನೆ,

ತಮ್ಮ ನಂಬುಗೆಯ,

(ಸಹಿ)

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ.

3ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001. 3rd Floor, 3rd Stage, M.S. Building, Bangalore-560 001.
Tel. : 2238 4574 / 2203 2941 Fax : 080 - 2238 9520 e-mail: secypr@karnataka.gov.in